**SC No.30/2025**
**PW-3**
**CW-4**

ಕರ್ನಾಟಕ ಸರ್ಕಾರ
(ಸಿ.ಆರ್.ಪಿ.67)

ಹೇಳಿಕೆ ಹಾಳೆ
(ಆರ್.ಪಿ.ಸಂಖ್ಯೆ: 57)
ನಮೂನೆ ಸಂಖ್ಯೆ: 4

**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಇವರ ನ್ಯಾಯಾಲಯದಲ್ಲಿ, ಬೆಳಗಾವಿ.**

ಎಸ್.ಸಿ ನಂ: **30/2025**

| | | | |
|---|---|---|---|
| ಸಾಕ್ಷಿದಾರರ ಹೆಸರು | : | ಹಫೀಜಾ ಸನದಿ | ಪ್ರಾಸಾ: 3 |
| ಗಂಡನ ಹೆಸರು | : | ಕಾಸೀಮಸಾಬ ಸನದಿ | ಚಾಸಾ: 4 |
| ವಯಸ್ಸು | : | 50 ವರ್ಷ | ದಿನಾಂಕ 09.06.2026 ರಂದು ಸಾಕ್ಷಿದಾರರಿಗೆ ಸತ್ಯಪ್ರತಿಜ್ಞೆಯನ್ನು ಬೋಧಿಸಲಾಯಿತು. |
| ಉದ್ಯೋಗ | : | ಗೃಹಿಣಿ | |
| ವಾಸಸ್ಥಳ | : | ಶಹಪೂರ, ಬೆಳಗಾವಿ | |

**ಮುಖ್ಯವಿಚಾರಣೆ: ಮಾನ್ಯ ಸರ್ಕಾರಿ ಅಭಿಯೋಜಕರಿಂದ:**

ನನಗೆ ಚಾಸಾ 1, 10 ಮತ್ತು 11 ಗೊತ್ತು. ನನಗೆ ಆರೋಪಿತರ ಪರಿಚಯ ಇರುವುದಿಲ್ಲ. ನಮ್ಮ ಮತ್ತು ಆರೋಪಿತರ ನಡುವೆ ಯಾವುದೇ ಗಲಾಟೆ ನಡೆದಿರುವುದಿಲ್ಲ. ಆರೋಪಿತರು ನನಗಾಗಲಿ, ಚಾಸಾ 1, 10 ಮತ್ತು 11 ರವರಿಗೆ ಅವಾಚ್ಯ ಶಬ್ದಗಳಿಂದ ಬೈದಿಲ್ಲ ಮತ್ತು ಕೈಯಿಂದ, ಕಲ್ಲಿನಿಂದ ಮತ್ತು ವಿಕೇಟಿನಿಂದ ಹೊಡೆದು ಹಲ್ಲೆ ಮಾಡಿಲ್ಲ ಮತ್ತು ನಮಗೆ ಕೊಲೆ ಬೆದರಿಕೆ ಹಾಕಿರುವುದಿಲ್ಲ. ಆರೋಪಿತರು ಈ ಕೃತ್ಯ ಮಾಡಿರುತ್ತಾರೆ ಎಂದು ಹೇಳಿ ನಾನು ಪೋಲಿಸರ ಮುಂದೆ ಯಾವುದೇ ಹೇಳಿಕೆಯನ್ನು ಕೊಟ್ಟಿರುವುದಿಲ್ಲ.

2. ಪೋಲಿಸರು ನನ್ನ ಸಮಕ್ಷಮ ಘಟನಾ ಸ್ಥಳಕ್ಕೆ ಬಂದು ಯಾವುದೇ ಪಂಚನಾಮೆಯನ್ನು ಮಾಡಿರುವುದಿಲ್ಲ ಮತ್ತು ಯಾವುದೇ ವಸ್ತುಗಳನ್ನು ಅಮಾನತು ಪಡಿಸಿಕೊಂಡಿಲ್ಲ. ಈಗ ನನಗೆ ತೋರಿಸಿದ ಪಂಚನಾಮೆಯಲ್ಲಿ ನನ್ನ ಹೆಬ್ಬೆಟ್ಟಿನ ಗುರುತು ಇದೆ. ಆ ಪಂಚನಾಮೆಯನ್ನು ನಿ.ಪಿ.4 ಎಂದು ಗುರುತಿಸಲಾಗಿದೆ. ನಿ.ಪಿ.4ರಲ್ಲಿ ಏನು ಬರೆದಿದೆ ಮತ್ತು ಅದಕ್ಕೆ ಬೇರೆ ಯಾರು ಸಹಿ ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ. ಈಗ ನನಗೆ ತೋರಿಸಿರುವ ಫೋಟೊಗಳಲ್ಲಿ ನಾನು ಕಾಣಿಸುತ್ತೇನೆ. ಆ ಫೋಟೊಗಳನ್ನು ನಿ.ಪಿ.5 ಮತ್ತು 6 ಎಂದು ಗುರುತಿಸಲಾಗಿದೆ. ಈಗ ನನಗೆ ತೋರಿಸಿದ ಹೇಳಿಕೆಯಲ್ಲಿ ನನ್ನ ಹೆಬ್ಬೆಟ್ಟು ಗುರುತು ಇದೆ. ಆ ಹೇಳಿಕೆಯನ್ನು ನಿ.ಪಿ.7 ಎಂದು ಗುರುತಿಸಲಾಗಿದೆ. ನಿ.ಪಿ. 7ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಮಾನ್ಯ ಸರ್ಕಾರಿ ಅಭಿಯೋಜಕರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರುತ್ತಾರೆ. ಕಡತವನ್ನು ಪರಿಶೀಲಿಸಲಾಗಿ ಸಾಕ್ಷಿಯು ಅಭಿಯೋಜನೆಯ ಪರ ಕೇಸಿಗೆ ವ್ಯತಿರಿಕ್ತವಾಗಿ ಸಾಕ್ಷಿ ನುಡಿಯುವುದು ಕಂಡುಬರುತ್ತದೆ, ಈ ಕಾರಣದಿಂದ ಮಾನ್ಯ ಅಭಿಯೋಜಕರ ಕೋರಿಕೆಯನ್ನು ಮನ್ನಿಸಿ, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಮಾನ್ಯ ಅಭಿಯೋಜಕರು ಸಾಕ್ಷಿಯನ್ನು ಪಾಟೀಸವಾಲಿಗೆ ಒಳಪಡಿಸಲು ಅನುಮತಿ ನೀಡಲಾಗಿದೆ.)

<u>ಪಾಟೀ ಸವಾಲುಃ ಸರ್ಕಾರದ ಪರ ಮಾನ್ಯ ಅಭಿಯೋಜಕರಿಂದಃ</u>

3. ದಿನಾಂಕ 23.05.2024 ರಂದು ಸಂಜೆ 06.00 ಗಂಟೆಗೆ ಶಹಪೂರದ ಅಲೂನಳ್ಳಿ ಹಜರತ ಬಾಬಾ ದರ್ಗಾದ ಹತ್ತಿರ ನಾನು ಮತ್ತು ಚಾಸಾ 1, 10 ಮತ್ತು 11 ರವರಿದ್ದಾಗ ಆರೋಪಿತರು ಒಂದು ಅಕ್ರಮಕೂಟ ಕಟ್ಟಿಕೊಂಡು ಬಂದು ನಮ್ಮೊಂದಿಗೆ ಜಗಳ ತೆಗೆದಿದ್ದರು ಎನ್ನುವುದು ನಿಜವಲ್ಲ. ಆರೋಪಿತರು ಕ್ರಿಕೇಟ್ ಆಡುವ ವಿಷಯಕ್ಕೆ ಸಂಬಂಧಪಟ್ಟಂತೆ ನಮ್ಮೊಂದಿಗೆ ಜಗಳ ತೆಗೆದು ನಮಗೆ ಅವಾಚ್ಯ ಶಬ್ದಗಳಿಂದ ಬೈದು 1ನೇ ಆರೋಪಿಯು ಚಾಸಾ 10 ರವರಿಗೆ ಕ್ರಿಕೇಟ ಬ್ಯಾಟನಿಂದ ಮತ್ತು ವಿಕೇಟಿನಿಂದ ಹೊಡೆದು ಹಲ್ಲೆ ಮಾಡಿದ್ದರು ಎನ್ನುವುದು ನಿಜವಲ್ಲ. 3 ನೇ ಆರೋಪಿಯು ನಮಗೆ ಕಲ್ಲಿನಿಂದ ಹೊಡೆದು ಹಲ್ಲೆ

ಮಾಡಿದ್ದರು ಮತ್ತು ನನ್ನ ಕೈ ಮತ್ತು ಬಟ್ಟೆಗಳನ್ನು ಎಳೆದು ನನಗೆ ಅವಮಾನ ಮಾಡಿದ್ದ ಎನ್ನುವುದು ನಿಜವಲ್ಲ. ಆರೋಪಿತರು ನಮಗೆ ಕೊಲೆ ಬೆದರಿಕೆಯನ್ನು ಕೂಡ ಹಾಕಿದ್ದರು ಎನ್ನುವುದು ನಿಜವಲ್ಲ. ಈ ಬಗ್ಗೆ ನಾನು ಶಹಪೂರ ಪೋ.ಠಾಣೆಗೆ ಹಾಜರಾಗಿ ನಿ.ಪಿ.8 ರಂತೆ ಒಂದು ಹೇಳಿಕೆಯನ್ನು ಮತ್ತು ನಿ.ಪಿ. 9 ರಂತೆ ಒಂದು ಮರು ಹೇಳಿಕೆಯನ್ನು ಕೊಟ್ಟಿದ್ದೆ ಎನ್ನುವುದು ನಿಜವಲ್ಲ.

4. ದಿ. 24.05.2024 ರಂದು ಪೋಲಿಸರು ಘಟನಾ ಸ್ಥಳಕ್ಕೆ ಬಂದಾಗ ನಾನು ಸ್ಥಳವನ್ನು ತೋರಿಸಿದ್ದು ಪೋಲಸರು ಚಾಸಾ 2 ಮತ್ತು 3 ಇವರ ಸಮಕ್ಷಮ ನಿ.ಪಿ.4 ರಂತೆ ಪಂಚನಾಮೆಯನ್ನು ಜರುಗಿಸಿ ಕೃತ್ಯಕ್ಕೆ ಸಂಬಂಧಿಸಿದ ಒಂದು ಕ್ರಿಕೇಟ ಬ್ಯಾಟ, ಒಂದು ಸ್ಟಂಪ ಒಂದು ಕಲ್ಲನ್ನು ಅಮಾನತು ಪಡಿಸಿಕೊಂಡಿದ್ದರು ಎನ್ನುವುದು ನಿಜವಲ್ಲ. ಆ ಪಂಚನಾಮೆಯ ಕಾಲಕ್ಕೆ ಪೋಲಿಸರು ನಿ.ಪಿ. 5 ಮತ್ತು 6 ರಂತೆ ಫೋಟೊಗಳನ್ನು ತೆಗೆದಿದ್ದರು ಎನ್ನುವುದು ನಿಜವಲ್ಲ. ದಿ.03.07.2024 ರಂದು ನಾನು ಬೆಳಗಾವಿಯ ಜೆ.ಎಮ್.ಎಫ್.ಸಿ. ನ್ಯಾಯಾಲಯದ ಮುಂದೆ ಹಾಜರಾಗಿ ನಿ.ಪಿ. 7ರಂತೆ ಒಂದು ಹೇಳಿಕೆಯನ್ನು ಕೊಟ್ಟಿದ್ದೆ ಎನ್ನುವುದು ನಿಜವಲ್ಲ. ನಾನು ಮತ್ತು ಆರೋಪಿತರು ಈಗ ರಾಜಿ ಮಾಡಿಕೊಂಡಿದ್ದೇವೆ ಎನ್ನುವುದು ನಿಜ. ಆ ಕಾರಣಕ್ಕಾಗಿ ನಾನು ನ್ಯಾಯಾಲಯದ ಮುಂದೆ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎನ್ನುವುದು ನಿಜವಲ್ಲ.

ಪಾಟೀ ಸವಾಲುಃ ಆರೋಪಿತರ ಪರವಾಗಿಃ ಶ್ರೀ ಪಿ.ಎಸ್.ವೈ. ವಕೀಲರಿಂದಃ

ಆರೋಪಿ ಪರ ವಕೀಲರು ಇಲ್ಲ ಎಂದು ಹೇಳುತ್ತಾರೆ.

**SC No.30/2025**
**PW-3**
**CW-4**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತ ಲೇಖನದ ಮೂಲಕ ಬೆರಳಚ್ಚು ಮಾಡಿಸಲಾಯಿತು.)

ಓ ಹೇ ಕೇ ಸರಿ ಇದೆ,

(ಮಂಜುನಾಥ ನಾಯಕ)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು
ಬೆಳಗಾವಿ.